# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | (595) 617 |
| ಮಾನ್ಯ ಸದಸ್ಯರ ಹೆಸರು | ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | 11.12.2023 |
| ಉತ್ತರಿಸುವ ಸಚಿವರು | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ದಕ್ಷಿಣ ಕನ್ನಡ ಜಿಲ್ಲೆಯ ಬೆಳ್ತಂಗಡಿ ತಾಲೂಕಿನ ನಾರಾವಿ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಹೆರಿಗೆ ಸೌಲಭ್ಯ ವ್ಯವಸ್ಥೆ ಹಾಗೂ ಪೂರ್ಣಕಾಲಿಕ ಆರೋಗ್ಯಾಧಿಕಾರಿಗಳಿಲ್ಲದೆ ಬಡ ಜನರಿಗೆ ಸಾಕಷ್ಟು ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? | ದಕ್ಷಿಣ ಕನ್ನಡ ಜಿಲ್ಲೆಯ, ಬೆಳ್ತಂಗಡಿ ತಾಲ್ಲೂಕಿನ ನಾರಾವಿ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ವೈದ್ಯಾಧಿಕಾರಿ ಸ್ನಾತಕೋತ್ತರ ವ್ಯಾಸಂಗಕ್ಕೆ ತೆರಳಿರುವುದರಿಂದ ಹುದ್ದೆ ಖಾಲಿಯಿದೆ.<br>ಪ್ರಸ್ತುತ ಪ್ರಾಥಮಿಕ ಆರೋಗ್ಯ ಕೇಂದ್ರ ನೆಲ್ಲಿಕಾರ್ ಇಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಯನ್ನು ಪ್ರಾಥಮಿಕ ಆರೋಗ್ಯ ಕೇಂದ್ರ ನಾರಾವಿ ಇಲ್ಲಿ ವಾರದಲ್ಲಿ 2 ದಿನ ಹೊರರೋಗಿ ವಿಭಾಗದ ಕರ್ತವ್ಯ ನಿರ್ವಹಿಸಲು ನಿಯೋಜನೆ ಮಾಡಲಾಗಿದೆ. ವೈದ್ಯರು ಕರ್ತವ್ಯ ನಿರ್ವಹಿಸುತ್ತಿರುತ್ತಾರೆ.<br>ಜಿಲ್ಲಾಧಿಕಾರಿ/ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು ದಕ್ಷಿಣ ಕನ್ನಡ ಇವರಿಂದ ನಾರಾವಿ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಗುತ್ತಿಗೆ ಆಧಾರದ ಮೇಲೆ ವೈದ್ಯಾಧಿಕಾರಿ ನೇಮಿಸುವ ಪ್ರಕ್ರಿಯೆ ಚಾಲ್ತಿಯಲ್ಲಿರುತ್ತದೆ. |
| ಆ | ಬಂದಿದ್ದಲ್ಲಿ ಸುಮಾರು ೧೦ ಕ್ಕೂ ಹೆಚ್ಚು ಗ್ರಾಮಗಳಿಗೆ ಕೇಂದ್ರ ಸ್ಥಾನದಲ್ಲಿರುವ ನಾರಾವಿ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಇಲ್ಲಿಯವರೆಗೂ ಹೆರಿಗೆ ಸೌಲಭ್ಯ ವ್ಯವಸ್ಥೆ ಕಲ್ಪಿಸದಿರಲು ಹಾಗೂ ಪೂರ್ಣ ಕಾಲಿಕ ಆರೋಗ್ಯಾಧಿಕಾರಿಗಳನ್ನು ನಿಯುಕ್ತಿಗೊಳಿಸದಿರಲು ಕಾರಣಗಳೇನು | |
| ಇ | ಯಾವ ಕಾಲಮಿತಿಯೊಳಗೆ ಸದರಿ ನಾರಾವಿ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಹೆರಿಗೆ ಸೌಲಭ್ಯ ವ್ಯವಸ್ಥೆ ಕಲ್ಪಿಸುವುದರ ಜೊತೆಗೆ ಪೂರ್ಣಕಾಲಿಕ ಆರೋಗ್ಯಾಧಿಕಾರಿಗಳನ್ನು ನಿಯುಕ್ತಿಗೊಳಿಸಲಾಗುವುದು | |

**ಆಕುಕ/617/ಚು.ರ.ಪ್ರ/2023**

**(ದಿನೇಶ್ ಗುಂಡೂರಾವ್)**
**ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು**